ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸೈಬವರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 2/4/21

# ಈಶ್ವರಪ್ಪ ವಿರುದ್ಧ ಸಚಿವ, ಶಾಸಕರ ಕಿಡಿ

## ಸಿಎಂ ವಿರುದ್ಧ ಗೌರ್ನರ್‌ಗೆ ದೂರು ನೀಡಿದ್ದಕ್ಕೆ ಆಕ್ಷೇಪ
## ಸಂಪುಟ ಸಭೆಯಲ್ಲೇ ಚರ್ಚೆ ನಡೆಸಬೇಕಿತ್ತು: ಸಚಿವರು
## ಈಶ್ವರಪ್ಪ ವಿರುದ್ಧ ಹೈಕಮಾಂಡ್‌ಗೆ ದೂರು: ಶಾಸಕರು

• **ಕನ್ನಡಪ್ರಭ ವಾರ್ತೆ** ಬೆಂಗಳೂರು 2/4/21

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಹಸ್ತಕ್ಷೇಪದ ಆರೋಪದೊಂದಿಗೆ ರಾಜ್ಯಪಾಲರಿಗೆ ಲಿಖಿತ ದೂರು ನೀಡಿರುವ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಅವರ ನಡೆಗೆ ಹಲವು ಸಚಿವರು ಹಾಗೂ ಆಡಳಿತಾರೂಢ ಬಿಜೆಪಿಯ ಶಾಸಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಅನುದಾನ ಬಿಡುಗಡೆ ಮಾಡುವುದು ಮುಖ್ಯಮಂತ್ರಿಗಳ ಪರಮಾಧಿಕಾರ. ರಾಜ್ಯಪಾಲರಿಗೆ ದೂರು ನೀಡುವ ಹೊಸ ಪದ್ಧತಿಯನ್ನು ಈಶ್ವರಪ್ಪ ಅನುಸರಿಸಿರುವುದು ಆಶ್ಚರ್ಯ ಮೂಡಿಸಿದೆ. ಮುಖ್ಯಮಂತ್ರಿ ಮಾರ್ಗದರ್ಶನದಲ್ಲಿ ನಾವೆಲ್ಲಾ ಕೆಲಸ ಮಾಡುತ್ತಿದ್ದೇವೆ. ಯಾವುದೇ ಸಮಸ್ಯೆಗಳಿದ್ದರೆ ಸಚಿವ ಸಂಪುಟ ಸಭೆ ಅಥವಾ ಇತರೆ ವೇದಿಕೆಯಲ್ಲಿ ಚರ್ಚಿಸಲು ಅವಕಾಶ ಇದೆ ಎಂದು ಹಲವು ಸಚಿವರು ಜಂಟಿಯಾಗಿ ಹೇಳಿದ್ದಾರೆ.

ತಮ್ಮ ಇಲಾಖೆಯಲ್ಲಿ ಮುಖ್ಯಮಂತ್ರಿಗಳು ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂಬುದನ್ನು ರಾಜ್ಯಪಾಲರ ಅಂಗಳಕ್ಕೆ ಕೊಂಡೊಯ್ದಿರುವುದು ಸರಿಯಲ್ಲ, ಸಚಿವ ಈಶ್ವರಪ್ಪ ನಿಲುವು ಪ್ರಶ್ನಿಸಿ ಹೈಕಮಾಂಡ್ ಮೊರೆ ಹೋಗುತ್ತೇವೆ ಮುಖ್ಯಮಂತ್ರಿಗಳ ಆಪ್ತ ಶಾಸಕರು ತಿಳಿಸಿದ್ದಾರೆ.

ನಾಲ್ವರು ಸಚಿವರು ಗುರುವಾರ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಚರ್ಚಿಸಿದ ಬಳಿಕ ಗೃಹ ಕಚೇರಿ 'ಕೃಷ್ಣಾ' ಬಳಿ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು. ➘ 8

## ಅರುಣ್ ಸಿಂಗ್ ಅಸಮಾಧಾನ

ನವದೆಹಲಿ: ಮುಖ್ಯಮಂತ್ರಿ ಯಡಿಯೂರಪ್ಪ ಕಾರ್ಯವೈಖರಿ ಬಗ್ಗೆ ಸಚಿವ ಕೆ.ಎಸ್. ಈಶ್ವರಪ್ಪ ರಾಜ್ಯಪಾಲರಿಗೆ ಪತ್ರ ಬರೆದಿರುವುದಕ್ಕೆ ರಾಜ್ಯ ಬಿಜೆಪಿ ಉಸ್ತುವಾರಿ ಅರುಣ್ ಸಿಂಗ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯಪಾಲರಿಗೆ ಪತ್ರ ಬರೆದಿರುವುದು ಸರಿಯಾದ ಕ್ರಮ ಇಲ್ಲ, ಪಕ್ಷದ ವೇದಿಕೆಯಲ್ಲಿ ಇದನ್ನು ಪ್ರಸ್ತಾಪಿಸಬೇಕಾಗಿತ್ತು ಎಂದಿದ್ದಾರೆ. ವಿವರ ➘ 7

## ಅನುದಾನ ಬಿಡುಗಡೆಗೆ ತಡೆ

ಬೆಂಗಳೂರು: ಮುಖ್ಯಮಂತ್ರಿ ವಿರುದ್ಧ ಸಚಿವ ಈಶ್ವರಪ್ಪ ರಾಜ್ಯಪಾಲರಿಗೆ ದೂರು ನೀಡಿದ ಬೆನ್ನಲ್ಲೇ ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆಯಾಗಿದ್ದ 65 ಕೋಟಿ ರು. ಕ್ರಿಯಾ ಯೋಜನೆಗೆ ತಡೆ ನೀಡಲಾಗಿದೆ. ಗ್ರಾಮೀಣಾಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿ ಸೂಚನೆ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ. ವಿವರ ➘

12

# ಈಶ್ವರಪ್ಪ ವಿರುದ್ಧ ಸಚಿವ, ಶಾಸಕರ ಕಿಡಿ

೬ ಮೊದಲ ಪುಟದಿಂದ

ಸಚಿವರಾದ ಬಸವರಾಜ ಬೊಮ್ಮಾಯಿ, ಆರ್.ಅಶೋಕ್, ಡಾ. ಕೆ.ಸುಧಾಕರ್ ಹಾಗೂ ಕೃಷಿ ಸಚಿವ ಬಿ.ಸಿ.ಪಾಟೀಲ್ ಮಾತನಾಡಿ, ರಾಜ್ಯಪಾಲರಿಗೆ ದೂರು ನೀಡಿರುವ ಈಶ್ವರಪ್ಪ ನಡೆಯನ್ನು ಖಂಡಿಸಿದ್ದಾರೆ.

ಬೊಮ್ಮಾಯಿ ಮಾತನಾಡಿ, ಶಾಸಕರ ಅಗತ್ಯಕ್ಕನುಗುಣವಾಗಿ ಮುಖ್ಯಮಂತ್ರಿ ಅನುದಾನ ಬಿಡುಗಡೆ ಮಾಡಿದ್ದಾರೆ. ಮುಖ್ಯಮಂತ್ರಿ ಬಳಿಯೇ ಹಣಕಾಸು ಖಾತೆ ಇದೆ. ಯಾವ ಖಾತೆಗೆ ಎಷ್ಟು ಯಾವ ಕಾಮಗಾರಿಗೆ ಎಷ್ಟು ಹಣ ಬಿಡುಗಡೆ ಮಾಡಬೇಕು ಎಂಬುದು ಅವರಿಗೆ ಗೊತ್ತಿದೆ. ಅದಕ್ಕೆ ಇಲ್ಲಸಲ್ಲದ ಹೇಳಿಕೆ ನೀಡಿ ಗೊಂದಲ ಸೃಷ್ಟಿಸುವುದನ್ನು ಯಾರೂ ಒಪ್ಪುವುದಿಲ್ಲ. ಈಶ್ವರಪ್ಪ ಅವರಿಗೆ ಅಸಮಾಧಾನ ಇದ್ದರೆ ಮುಖ್ಯಮಂತ್ರಿಗಳ ಜತೆ ಚರ್ಚೆ ಮಾಡಬೇಕಿತ್ತು. ಅದನ್ನು ಬಿಟ್ಟು ರಾಜ್ಯಪಾಲರ ಅಂಗಳಕ್ಕೆ ಇದನ್ನು ತೆಗೆದುಕೊಂಡು ಹೋಗಿರುವುದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಶೋಕ್ ಮಾತನಾಡಿ, ಮಾಧ್ಯಮದಲ್ಲಿ ಮುಖ್ಯಮಂತ್ರಿಗಳ ವಿರುದ್ಧ ಸಚಿವ ಕೆ.ಎಸ್.ಈಶ್ವರಪ್ಪ ದೂರು ನೀಡಿರುವ ವಿಚಾರ ತಿಳಿಯಿತು. ನಾವೆಲ್ಲಾ ಯಡಿಯೂರಪ್ಪ ಅವರ ನಾಯಕತ್ವದಲ್ಲಿ ಚುನಾವಣೆ ಎದುರಿಸಿ ಗೆದ್ದವರು. ಸಚಿವರನ್ನು ಮಾಡುವುದೂ ಮುಖ್ಯಮಂತ್ರಿಗಳ ಪರಮಾಧಿಕಾರ. ಆದರೆ, ಈಗ ಆಗಿರುವ ಬೆಳಗವಣಿಗೆ ದುರದೃಷ್ಟಕರ. ಶಾಸಕರು ಬಂದು ಅನುದಾನಕ್ಕೆ ಬೇಡಿಕೆ ಇಡುವುದು ಸಾಮಾನ್ಯ. ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆ ಮಾಡುವುದು ಮುಖ್ಯಮಂತ್ರಿಗಳ ಪರಮಾಧಿಕಾರ. ಇದನ್ನು ಆಕ್ಷೇಪಿಸಿ ಈಶ್ವರಪ್ಪ ಅವರು ರಾಜ್ಯಪಾಲರ ಬಳಿ ದೂರು ನೀಡಿರುವುದು ಸರಿಯಲ್ಲ ಎಂದು ಬೇಸರ ಹೊರಹಾಕಿದರು.

ಸುಧಾಕರ್ ಮಾತನಾಡಿ, ಸಚಿವ ಸಂಪುಟ ಮುಖ್ಯಮಂತ್ರಿ ಬಿ. ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ಇದೆ. ಯಡಿಯೂರಪ್ಪ ಅವರನ್ನು ಸರ್ವಾನುಮತದಿಂದ ಮುಖ್ಯಮಂತ್ರಿ ಸ್ಥಾನದಲ್ಲಿ ಕೂರಿಸಿದ್ದೇವೆ. ಯಾವುದೇ ಇಲಾಖೆಯ ಕಡತವನ್ನು ಮುಖ್ಯಮಂತ್ರಿಗಳು ತರಿಸಿಕೊಳ್ಳಬಹುದು. ಜತೆಗೆ ಅನುದಾನ ಹಂಚಿಕೆ ಮಾಡುವ ಅಧಿಕಾರ ಸಹ ಅವರಿಗಿದೆ. ಈಗ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ಈ ರೀತಿ ಮಾಡಿರುವುದು ಸರ್ಕಾರಕ್ಕೆ ಮುಜುಗರ ಉಂಟು ಮಾಡಿದ್ದಾರೆ ಎಂದು ಹೇಳಿದರು.

ಬಿ.ಸಿ.ಪಾಟೀಲ್ ಮಾತನಾಡಿ, ಈಶ್ವರಪ್ಪ ಅವರು ಹಿರಿಯರು. ಸಂಪುಟ ಸಭೆಯಲ್ಲಿ ಯಾವುದೇ ವಿಷಯವನ್ನು ಪ್ರಸ್ತಾಪಿಸದೆ ಈ ರೀತಿ ನೇರವಾಗಿ ಏಕಾಏಕಿ ರಾಜ್ಯಪಾಲರಿಗೆ ದೂರು ಸಲ್ಲಿಸುವುದು ಹಿರಿಯರಾದ ಅವರಿಗೆ ಶೋಭೆ ತರುವಂಥದ್ದಲ್ಲ ಟೀಕಿಸಿದರು.

**ಸಹಿ ಸಂಗ್ರಹಿಸಿ ಹೈಕಮಾಂಡ್‌ಗೆ ದೂರು:** ಇದೇ ವೇಳೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ಎಂ.ಪಿ.ರೇಣುಕಾಚಾರ್ಯ ನೇತೃತ್ವದ ಶಾಸಕರ ನಿಯೋಗವು ನಿಮ್ಮ ಜತೆ ನಾವಿದ್ದೇವೆ ಎಂದು ಬೆಂಬಲ ಸೂಚಿಸಿದರು. ಈ ನಿಯೋಗದಲ್ಲಿ ಶಾಸಕರಾದ ಮಾಡಾಳು ವಿರೂಪಾಕ್ಷಪ್ಪ, ಎ.ಎಸ್.ಪಾಟೀಲ್ ನಡಹಳ್ಳಿ, ದಿನಕರ್ ಶೆಟ್ಟಿ, ಪರಣ್ಣ ಮುನವಳ್ಳಿ ಮೊದಲಾದವರಿದ್ದರು.

ಬಳಿಕ ಸುದ್ದಿಗಾರರ ಜತೆ ಮಾತನಾಡಿದ ರೇಣುಕಾಚಾರ್ಯ, ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ಅನುದಾನ ಕೇಳಿದ್ದೆವು. ಇದನ್ನು ಈಶ್ವರಪ್ಪ ಅವರು ತಡೆಹಿಡಿದಿದ್ದಾರೆ. ಇದು ಆಡಳಿತ ಪಕ್ಷದ ಸಚಿವರಿಗೆ ಮುಖ್ಯಮಂತ್ರಿಗಳ ಮೇಲೆ ವಿಶ್ವಾಸ ಇಲ್ಲ ಎಂಬುದು ಗೊತ್ತಾಗಿದೆ. ಈ ಹಿಂದೆ ಸರ್ಕಾರಕ್ಕೆ, ಪಕ್ಷಕ್ಕೆ ಡ್ಯಾಮೇಜ್ ಮಾಡಿದ್ದೀರಿ. ಚುನಾವಣೆ ವೇಳೆ ರಾಯಣ್ಣ ಬ್ರಿಗೇಡ್ ಕಟ್ಟಿ ಪಕ್ಷದ ವಿರುದ್ಧ ಅವರೇ ಮಾತನಾಡಿದ್ದರು. ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರಿಗೆ ದೂರು ಕೊಟ್ಟಿರುವುದು ಇದೇ ಮೊದಲು. ನಾವು ಸಹ ಹೈಕಮಾಂಡ್‌ಗೆ ಈಶ್ವರಪ್ಪ ವಿರುದ್ಧ ದೂರು ನೀಡುತ್ತೇವೆ ಎಂದರು.

**ಸರ್ಕಾರ ಎಡವಿಬಿದ್ದಿದೆ, ರಾಷ್ಟ್ರಪತಿ ಆಳ್ವಿಕೆ ಹೇರಿ:** ಬಸವಕಲ್ಯಾಣ: ರಾಜ್ಯದಲ್ಲಿ ಬಿಜೆಪಿ ಸರ್ಕಾರ ಸಂಪೂರ್ಣ ಎಡವಿದೆ, ಸರ್ಕಾರ ಇದೆಯೋ ಇಲ್ಲವೋ ಎನ್ನುವ ಪರಿಸ್ಥಿತಿಯಿದೆ. ಕೂಡಲೇ ರಾಷ್ಟ್ರಪತಿ ಆಡಳಿತ ಹೇರಿ ಸರ್ಕಾರ ವಿಸರ್ಜನೆ ಮಾಡಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಆಗ್ರಹಿಸಿದರು. ನಗರದ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಸುದ್ದಿಗಾರರ ಜತೆ ಮಾತನಾಡಿ, ತಮ್ಮ ಇಲಾಖೆಯ ಕೆಲಸಗಳಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಸ್ತಕ್ಷೇಪ ಮಾಡಿ ಅನುದಾನ ಬಿಡುಗಡೆ ಮಾಡುತ್ತಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ ರಾಜ್ಯಪಾಲರಿಗೆ ದೂರು ನೀಡಿದ್ದಾರೆ. ಪರಿಸ್ಥಿತಿ ಹೀಗಿದ್ದಾಗ ಸರ್ಕಾರ ಬಿದ್ದು ಹೋಗಿದೆ ಎಂದರೆ ತಪ್ಪಲ್ಲ ಎಂದರು.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮುಖ್ಯಮಂತ್ರಿಗಳು ಶಾಸಕರಿಗೆ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ ಸಚಿವರು ಪ್ರಶ್ನಿಸಬಾರದು. ಯಡಿಯೂರಪ್ಪ ಅವರು ಬರಿ ಮುಖ್ಯಮಂತ್ರಿ ಮಾತ್ರವಲ್ಲ ಹಣಕಾಸು ಸಚಿವರು ಸಹ ಆಗಿದ್ದಾರೆ. ನಮ್ಮ ಆಡಳಿತ ನಮ್ಮ ಸಚಿವ ಸಂಪುಟದ ಮಧ್ಯೆಯೇ ಇರಬೇಕು. ಈ ವಿಷಯ ಹೊರಗಡೆ ಹೋಗುವಂಥದ್ದು ಸಾಧು ಅಲ್ಲ, ಸೌಜನ್ಯವೂ ಅಲ್ಲ. ಇಂತಹ ವಿಷಯದಲ್ಲಿ ಮುಖ್ಯಮಂತ್ರಿಗಳನ್ನು ಪ್ರಶ್ನೆ ಮಾಡುವಂಥದ್ದು ಸರಿಯಾದ ವಿಧಾನವೂ ಅಲ್ಲ

• ಗೋವಿಂದ ಕಾರಜೋಳ, ಉಪಮುಖ್ಯಮಂತ್ರಿ